ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

ಶ್ರೀ ಎಸ್. ನಾಗರಾಜ(ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

96 (105) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಖಾಲಿ ಇರುವ ಬೋಧಕ/ಬೋಧಕೇತರ ಮತ್ತು ತಾಂತ್ರಿಕ ಹುದ್ದೆಗಳ ಸಂಖ್ಯೆ ಎಷ್ಟು; ಅವು ಯಾವುವು; (ಹುದ್ದೆವಾರು ವಿವರ ಒದಗಿಸುವುದು)

(ಆ) ಈ ಹುದ್ದೆಗಳನ್ನು ಭರ್ತಿ ಮಾಡುವ ಮೂಲಕ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸಿ, ಮೈಸೂರು ವಿಶ್ವವಿದ್ಯಾನಿಲಯವನ್ನು ದೇಶದಲ್ಲೇ ಅತ್ಯುತ್ತಮ ವಿಶ್ವವಿದ್ಯಾನಿಲಯವನ್ನಾಗಿ ರೂಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ;

(ಇ) ಕಳೆದ ಮೂರು ವರ್ಷಗಳಲ್ಲಿ ಮೈಸೂರು ವಿಶ್ವವಿದ್ಯಾನಿಲಯಕ್ಕೆ ಕೇಂದ್ರ ಸರ್ಕಾರದಿಂದ ಮಂಜೂರಾಗಿ ಬಂದಿರುವ ಅನುದಾನ ಎಷ್ಟು; ಈ ಅನುದಾನವನ್ನು ಯಾವ ಉದ್ದೇಶಕ್ಕೆ ಬಳಕೆ ಮಾಡಿಕೊಳ್ಳಲಾಗಿದೆ? (ವಿವರ ಒದಗಿಸುವುದು)